## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕಿರು ಸಾಲ ಯೋಜನೆ - ಸಾಲ ಮತ್ತು ಸಹಾಯಧನ ಮೊತ್ತ ರೂ. 5,000/- ದಿಂದ ರೂ. 10,000/- ಗಳಿಗೆ ಏರಿಸುವ ಬಗ್ಗೆ.

- - - -

ಪ್ರಸ್ತಾವನೆ:

1. ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ 3 ನಿಗಮಗಳಿಂದ 1) ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಮತ್ತು ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಕಿರು ಸಾಲ ಯೋಜನೆಯನ್ನು ಜಾರಿಗೊಳಿಸಲಾಗುತ್ತದೆ.
2. ಈ ಯೋಜನೆಯಡಿಯಲ್ಲಿ ಒಟ್ಟು ಘಟಕ ವೆಚ್ಚ ರೂ. 5,000/- ಇದರಲ್ಲಿ ರೂ. 2,500/- ಸಹಾಯಧನ ಮತ್ತು ರೂ. 2,500/- ಸಾಲ ನೀಡಲಾಗುತ್ತದೆ.
3. 2011-12 ನೇ ಸಾಲಿನ ಆಯವ್ಯಯದಲ್ಲಿ ರೂ. 5,000/- ಮೊತ್ತವನ್ನು ರೂ. 10,000/- ಗಳಿಗೆ ಹೆಚ್ಚಿಸಲು ಮತ್ತು ಅದರಲ್ಲಿ ರೂ. 5,000/- ಸಹಾಯಧನವನ್ನು ನೀಡಲು ಘೋಷಿಸಲಾಗಿದೆ.
4. ಸದರಿ ಘೋಷಣೆಯನ್ನು ಜಾರಿಗೆ ತಂದು ಅನುಷ್ಠಾನಗೊಳಿಸಲು ಸರ್ಕಾರ ಈ ಕೆಳಕಂಡಂತೆ ಆದೇಶ ನೀಡಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 48 ಎಸ್‌ಡಿಸಿ 2011**

**ಬೆಂಗಳೂರು, ದಿನಾಂಕ : 04.05.2011.**

ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ 3 ನಿಗಮಗಳಿಂದ 1) ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಮತ್ತು ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮಗಳಿಂದ ಕಿರು ಸಾಲ ಯೋಜನೆಯಡಿಯಲ್ಲಿ ಘಟಕ ವೆಚ್ಚ ರೂ. 5,000/- ಗಳಿಂದ ರೂ. 10,000/- ಗಳಿಗೆ ಹೆಚ್ಚಿಸಿ ಸಹಾಯಧನ ಮತ್ತು ಸಾಲ 50:50 ಅನುಪಾತದಲ್ಲಿ ನೀಡಿ ಅನುಷ್ಠಾನಗೊಳಿಸಲು ಆದೇಶಿಸಿದೆ. ಫಲಾನುಭವಿಗಳು ಬಿಪಿಎಲ್ ಕುಟುಂಬಗಳಿಗೆ ಸೇರಿರಬೇಕು.

ಈ ಸಂಬಂಧದ ವೆಚ್ಚವನ್ನು 2011-12ನೇ ಸಾಲಿನ ಒದಗಿಸಿದ ಈ ಕೆಳಕಂಡ ಲೆಕ್ಕಶೀರ್ಷಿಕೆಗಳಲ್ಲಿ ಭರಿಸಬಹುದು.

1) ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ - 2225-01-190-2-09 /4225-01-190-0-03

2) ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ - 2225-02-190-2-07 /4225-02-190-1-02

3) ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮ - 2225-03-800-0-05 /4225-03-190-0-01

ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಈಗಾಗಲೇ ಚಾಲ್ತಿಯಲ್ಲಿರುವ ಯೋಜನೆಯಂತೆ ಅನ್ವಯವಾಗುತ್ತದೆ. ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಸಂ. ಆಇ 352 ವೆಚ್ಚ-3/2011 ದಿನಾಂಕ 03.05.2011 ರಂತೆ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಂ.ಘಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

9079
0/05/11

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
6. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ
7. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ / ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಮತ್ತು ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮ.
8. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ
9. ಶಾಖಾ / ರಕ್ಷ ಕಡತ / ಹೆಚ್ಚುವರಿ ಪ್ರತಿ